ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2015–16 :** **ದಿನಾಂಕ: 11–5–2015**

## ಪತ್ರಿಕಾ ಆಮಂತ್ರಣ

| 1. | ಪತ್ರಿಕಾ ಗೋಷ್ಠಿ: | ದಿನಾಂಕ & ಸಮಯ | ಸ್ಥಳ: |
|---|---|---|---|
| | ಅಧ್ಯಕ್ಷರು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರಿಂದ<br><br>ಏಪ್ರಿಲ್– 2015 ರ ಎಸ್ ಎಸ್ ಎಲ್ ಸಿ ಪರೀಕ್ಷೆ ಫಲಿತಾಂಶ ಪ್ರಕಟ | 12–05–2015<br>ಮಂಗಳವಾರ<br>ಮಧ್ಯಾಹ್ನ<br>2.30 ಕ್ಕೆ | ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಕಛೇರಿ, ಮಲ್ಲೇಶ್ವರಂ, ಬೆಂಗಳೂರು |

## ಪತ್ರಿಕಾ ಪ್ರಕಟಣೆ

**ವಾರ್ತಾ ವಿಶೇಷ**

# ಇಂದಿನಿಂದ ಗ್ರಾಮಪಂಚಾಯತ್ ಚುನಾವಣಾ ಪ್ರಕ್ರಿಯೆ ಆರಂಭ

ಮಹಾತ್ಮಾ ಗಾಂಧಿ ಅವರ ಗ್ರಾಮ ಸ್ವರಾಜ್ಯದ ಕನಸಾಗಿ ರಾಜ್ಯದಲ್ಲಿ ಮೂಡಿ ಬಂದ ಗ್ರಾಮ ಪಂಚಾಯಿತಿಗಳ ಅವಧಿ ಮುಕ್ತಾಯಗೊಳ್ಳುತಿದ್ದು, ಕರ್ನಾಟಕದಲ್ಲಿ ನೂತನ ಗ್ರಾಮ ಪಂಚಾಯಿತಿಗಳ ಅಸ್ಥಿತ್ವಕ್ಕಾಗಿ ರಾಜ್ಯ ಚುನಾವಣಾ ಆಯೋಗವು ಇಂದಿನಿಂದ ಗ್ರಾಮ ಪಂಚಾಯಿತಿಗಳ ಚುನಾವಣಾ ಪ್ರಕ್ರಿಯೆ ಪ್ರಾರಂಭಿಸಿದೆ.

ರಾಜ್ಯದಲ್ಲಿ ಒಟ್ಟಾರೆ 6073 ಗ್ರಾಮ ಪಂಚಾಯಿತಿಗಳ 99981 ಸದಸ್ಯ ಸ್ಥಾನಗಳಿವೆ. ಇಂದಿನಿಂದ ಇವುಗಳಲ್ಲಿ 5844 ಗ್ರಾಮ ಪಂಚಾಯಿತಿಗಳ 94458 ಸದಸ್ಯ ಸ್ಥಾನಗಳ ಚುನಾವಣಾ ಪ್ರಕ್ರಿಯೆ ಆರಂಭಗೊಂಡಿದೆ. ಉಳಿಕೆ ಒಟ್ಟು 229 ಗ್ರಾಮ ಪಂಚಾಯಿತಿಗಳ 5523 ಸದಸ್ಯ ಸ್ಥಾನಗಳಿಗೆ 2015 ರ ಆಗಸ್ಟ್ ನಂತರದ ಅವಧಿಯಲ್ಲಿ ಮುಕ್ತಾಯವಾಗುವ, ನಗರ ಸ್ಥಳೀಯಸಂಸ್ಥೆಗಳಾಗಿ ಮೇಲ್ದರ್ಜೆಗೆ ಏರಿಸಿರುವ ಹಾಗೂ ನ್ಯಾಯಾಲಯದ ತಡೆಯಾಜ್ಞೆ ಇರುವ ಗ್ರಾಮ ಪಂಚಾಯಿತಿಗಳಾಗಿವೆ.

ಪ್ರಕ್ರಿಯೆ ಆರಂಭಗೊಂಡ ಗ್ರಾಮ ಪಂಚಾಯಿತಿ ಚುನಾವಣೆಗೆ 38604 ಮತಗಟ್ಟೆಗಳನ್ನು ಚುನಾವಣಾ ಆಯೋಗವು ವ್ಯವಸ್ಥೆಮಾಡಿದೆ. ಈ ಮತಗಟ್ಟೆಗಳಲ್ಲಿ 1,93,020 ಮತಗಟ್ಟೆ ಸಿಬ್ಬಂದಿ ನೇಮಕ ಮಾಡಲಾಗುವುದು. ಒಟ್ಟಾರೆ ರಾಜ್ಯದಲ್ಲಿ 2,81,56,987 ಮತದಾರರಿದ್ದಾರೆ. ಚುನಾವಣಾ ನೀತಿ ಸಂಹಿತೆಯು ಮೇ 10 ಬೆಳಿಗ್ಗೆ 8 ಗಂಟೆಯಿಂದ ಜಾರಿಗೆ ಬಂದಿದೆ. ಹಾಗೂ ಜೂನ್ 7 ರವರೆಗೆ ಜಾರಿಯಲ್ಲಿರುತ್ತದೆ. ಈ ನೀತಿ ಸಂಹಿತೆಯು ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ನಗರಪಾಲಿಕೆ ಹಾಗೂ ಮಹಾನಗರಪಲಿಕೆ ಪ್ರದೇಶಗಳಿಗೆ ಅನ್ವಯವಾಗುವುದಿಲ್ಲ. ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಅನ್ವಯಿಸುತ್ತದೆ.

ಈಗ ನಡೆದಿರುವ ಕರ್ನಾಟಕ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಮೊದಲ ಹಂತದಲ್ಲಿ ಮೈಸೂರು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಹಾಸನ, ಕೊಡಗು, ಮಂಡ್ಯ, ಚಾಮರಾಜನಗರ, ಉಡುಪಿ, ಬೆಳಗಾವಿ, ವಿಜಯಪುರ, ಹಾವೇರಿ, ಬಾಗಲಕೋಟೆ, ಉತ್ತರ ಕನ್ನಡ, ಧಾರವಾಡ, ಹಾಗೂ ಗದಗ ಜಿಲ್ಲೆಗಳಲ್ಲಿ ಮೇ 29 ರಂದು ಚುನಾವಣೆ ನಡೆಯಲಿದೆ. ಸಂಬಂಧಿಸಿದ ಜಿಲ್ಲಾಧಿಕಾರಿಗಳು ಇಂದು ಚುನಾವಣಾ ಅಧಿಸೂಚನೆಯನ್ನು ಹೊರಡಿಸಿದ್ದಾರೆ. ಮೇ 18 ನಾಮಪತ್ರ ಸಲ್ಲಿಕೆಗೆ ಕಡೆಯ ದಿನವಾಗಿದೆ. ನಾಮ ಪತ್ರಗಳನ್ನು ಮೇ 19 ರಂದು ಪರಿಶೀಲಿಸಲಾಗುವುದು. ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಮೇ 21 ಕೊನೆಯ ದಿನವಾಗಿದೆ. ಮರುಮತದಾನದ ಅಗತ್ಯವಿದ್ದಲ್ಲಿ ಮೇ 31 ರಂದು ನಡೆಸಲಾಗುವುದು.

ಕರ್ನಾಟಕ ಗ್ರಾಮ ಪಂಚಾಯಿತಿ ಚುನಾವಣೆಯ ಎರಡನೇ ಹಂತದಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಚಿಕ್ಕಬಳ್ಳಾಪುರ, ಶಿವಮೊಗ್ಗ, ತುಮಕೂರು, ಬೀದರ್, ಬಳ್ಳಾರಿ, ಕಲಬುರಗಿ, ಯಾದಗಿರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ಜೂನ್ 2 ರಂದು ಚುನಾವಣೆ ನಡೆಯಲಿದೆ. ಸಂಬಂಧಿಸಿದ ಜಿಲ್ಲಾಧಿಕಾರಿಗಳು ಮೇ 15ರಂದು ಚುನಾವಣಾ ಅಧಿಸೂಚನೆಯನ್ನು ಹೊರಡಿಸಲಿದ್ದಾರೆ. ಮೇ 22 ನಾಮಪತ್ರ ಸಲ್ಲಿಕೆಗೆ ಕಡೆಯ ದಿನವಾಗಿದೆ. ನಾಮ ಪತ್ರಗಳನ್ನು ಮೇ 23 ರಂದು ಪರಿಶೀಲಿಸಲಾಗುವುದು. ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಮೇ 25 ಕೊನೆಯ ದಿನವಾಗಿದೆ. ಮರುಮತದಾನದ ಅಗತ್ಯವಿದ್ದಲ್ಲಿ ಜೂನ್ 4 ರಂದು ನಡೆಸಲಾಗುವುದು.

ಮತದಾನ ನಡೆಯುವ ದಿನಾಂಕದಂದು ಬೆಳಿಗ್ಗೆ 7 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ಮತದಾನಕ್ಕೆ ವ್ಯವಸ್ಥೆ ಮಾಡಲಾಗುವುದು. ಹಾಗೂ ಮತಗಳ ಎಣಿಕೆ ಆಯಾ ತಾಲ್ಲೂಕು ಕೇಂದ್ರದಲ್ಲಿ ಜೂನ್ 5 ರಂದು ಬೆಳಿಗ್ಗೆ 8 ಗಂಟೆಯಿಂದ ನಡೆಯಲಿದೆ.

ಮಂಜುನಾಥ ಬಾಬು ಟಿ.ಸಿ

ಬಾಬು/ಬಿ.ಜಿ.ಪಿ ಸಹಾಯಕ ನಿರ್ದೇಶಕರು

## ಗಮಕ ತರಬೇತಿ: ದಿನಾಂಕ ಬದಲು

ಬೆಂಗಳೂರು ಮೇ 11 (ಕರ್ನಾಟಕ ವಾರ್ತೆ): ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಮೇ 26 ರಿಂದ 28 ರವರೆಗೆ ನಡೆಸಬೇಕಿದ್ದ ಗಮಕವಾಚನ ತರಬೇತಿಯನ್ನು ಕಾರಣಾಂತರದಿಂದ ಮೇ 23 ಮತ್ತು 24 ರಂದು ಅದೇ ಸ್ಥಳದಲ್ಲಿ ನಡೆಸಲಿದೆ ಎಂದು ಅಕಾಡೆಮಿ ರಿಜಿಸ್ಟ್ರಾರ್ ತಿಳಿಸಿದ್ದಾರೆ.

ಬಾಬು/ಬಿ.ಜಿ.ಪಿ